**ಕರ್ನಾಟಕ ಸರ್ಕಾರ**

ಸಂಖ್ಯೆ: ನಅಇ 93 ಮೈಅಪ್ರಾ 2020

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:02-11-2020

3941
3/11/2020

**ಇಂದ,**
ಸರ್ಕಾರದ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

**ಇವರಿಗೆ,**
1. ಆಯುಕ್ತರು, ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
2. ಸದಸ್ಯ ಕಾರ್ಯದರ್ಶಿ, ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು / ಸ್ಥಳೀಯ ಸಂಸ್ಥೆಗಳ ಯೋಜನಾ ಪ್ರಾಧಿಕಾರಗಳು.

ವಿಷಯ: ನಗರ ಯೋಜನಾ ನಿಯಮಗಳಲ್ಲಿ ಪೆಟ್ರೋಲ್ ಪಂಪ್ಸ್ ಮತ್ತು ಎಲ್.ಪಿ.ಜಿ. ದಾಸ್ತಾನು ಮಳಿಗೆಗಳಿಗೆ ಕನಿಷ್ಟ ಅಳತೆ ನಿಗಧಿಪಡಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 268 ಮೈಅಪ್ರಾ 2014 ದಿನಾಂಕ: 30-06-2016
2. ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 268 ಮೈಅಪ್ರಾ 2014 ದಿನಾಂಕ: 16-12-2019

* * * *

ನಗರ ಯೋಜನಾ ನಿಯಮಗಳಲ್ಲಿ ಪೆಟ್ರೋಲ್ ಪಂಪ್ಸ್ ಮತ್ತು ಎಲ್.ಪಿ.ಜಿ. ದಾಸ್ತಾನು ಮಳಿಗೆಗಳಿಗೆ ನಿವೇಶನ ಕಾಯ್ದಿರಿಸುವ ಹಾಗೂ (ಪೆಟ್ರೋಲಿಯಂ ಹಾಗೂ ಪೆಟ್ರೋಲ್ ಕೆಮಿಕಲ್) ಘಟಕಗಳ ಸುತ್ತಲೂ ಹಸಿರು ವಲಯ (ಬಫರ್ ಜೋನ್) ಅಳವಡಿಸುವ ಬಗ್ಗೆ ಎಲ್ಲಾ ಪ್ರಾಧಿಕಾರಗಳು ಆಯಾ ನಗರ/ಪಟ್ಟಣಗಳ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಮಹಾ ಯೋಜನೆಯನ್ನು ಸಿದ್ಧಪಡಿಸುವ ಸಂದರ್ಭಗಳಲ್ಲಿ ಪೆಟ್ರೋಲಿಯಂ ಹಾಗೂ ನೈಸರ್ಗಿಕ ಮಂತ್ರಾಲಯವು ನೀಡಿರುವ ಸಲಹೆಗಳನ್ನು ಸೂಕ್ತವಾಗಿ ಅಳವಡಿಸಿಕೊಳ್ಳಲು ಉಲ್ಲೇಖ(1)ರ ಸುತ್ತೋಲೆಯಲ್ಲಿ ನಿರ್ದೇಶನವನ್ನು ನೀಡಲಾಗಿದೆ.

ಉಲ್ಲೇಖ (2)ರ ಸುತ್ತೋಲೆಯಲ್ಲಿ ದಿನಾಂಕ: 30-06-2016ರ ಸುತ್ತೋಲೆಯಲ್ಲಿನ ಸಲಹೆ ಸಂಖ್ಯೆ(v) ನ್ನು ಮಾರ್ಪಡಿಸಿ ನಗರ ಯೋಜನಾ ನಿಯಮಗಳಲ್ಲಿ ಪೆಟ್ರೋಲ್ ಬಂಕ್ ಮತ್ತು ಎಲ್.ಪಿ.ಜಿ. ದಾಸ್ತಾನು ಮಳಿಗೆಗಳಿಗೆ ನಿವೇಶನಗಳ ಕನಿಷ್ಟ ಅಳತೆ ನಿಗಧಿಪಡಿಸುವ ಬಗ್ಗೆ ಕೆಲವು ಮಾನದಂಡವನ್ನು ನಿಗಧಿಪಡಿಸಲಾಗಿದೆ.

ಆದರೆ ಈಗಾಗಲೇ ಅಸ್ತಿತ್ವದಲ್ಲಿರುವ ರಾಜ್ಯದಲ್ಲಿನ ಮಹಾಯೋಜನೆಗಳ ಅನುಮೋದಿತ ವಲಯ ನಿಯಮಾವಳಿಗಳಲ್ಲಿ ಬೇರೆ ಬೇರೆ ರೀತಿ ಉಲ್ಲೇಖವಿರುತ್ತದೆ. ಇಂತಹ ಪ್ರಕರಣಗಳನ್ನು ಅನುಮತಿಸಲು ಸ್ಥಳೀಯ ಸಂಸ್ಥೆಗಳಿಂದ ಮಾರ್ಗದರ್ಶನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಗಳು ಸ್ವೀಕೃತವಾಗುತ್ತಿವೆ. ಆದ್ದರಿಂದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು/ಯೋಜನಾ ಪ್ರಾಧಿಕಾರಗಳು/ ಸ್ಥಳೀಯ ಸಂಸ್ಥೆಗಳ ಯೋಜನಾ ಪ್ರಾಧಿಕಾರಗಳು, ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 268 ಮೈಅಪ್ರಾ 2014 ದಿನಾಂಕ: 16-12-2019ರಲ್ಲಿನ ನಿರ್ದೇಶನವನ್ನು ಮಾನದಂಡವಾಗಿ ಏಕರೂಪವಾಗಿ ಕಟ್ಟುನಿಟ್ಟಾಗಿ ಅನುಸರಿಸುವಂತೆ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

**(ಸಿ.ಎಸ್.ಶಿವಕುಮಾರಸ್ವಾಮಿ)**
ಸರ್ಕಾರದ ಅಧೀನ ಕಾರ್ಯದರ್ಶಿ
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

ಪ್ರತಿ.
1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2. ಆಯುಕ್ತರು, ಮಹಾನಗರ ಪಾಲಿಕೆ, ಮೈಸೂರು.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ
ಕರ್ನಾಟಕ ಸರ್ಕಾರ
ಬಹುಮಹಡಿಗಳ ಕಟ್ಟಡ, ಗೇಟ್-4
ಪಿ.ಬಿ. ನಂ. 5257
ಡಾ॥ ಬಿ.ಆರ್.ಅಂಬೇಡ್ಕರ್ ವೀಧಿ
ಬೆಂಗಳೂರು-560 001
ದೂರವಾಣಿ ಸಂ.: 080-22258988

ಸಂಖ್ಯೆ: ನಗ್ರಾಯೋ:ಜಂನಿ:31:CIRC:2020-21
ಸರ್ಕಾರದ ಪತ್ರ ಸಂಖ್ಯೆ: ನಅಇ 93 ಮೈಅಪ್ರಾ 2020,
ದಿನಾಂಕ:02-11-2020.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 07 NOV 2020

<u>ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.</u>

1. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
5. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
6. ಮುಖ್ಯಾಧಿಕಾರಿಗಳು/ಆಯುಕ್ತರು, ಪುರಸಭೆ/ನಗರಸಭೆ ಯೋಜನಾ ಪ್ರಾಧಿಕಾರಗಳು.
7. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
8. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
10. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ತಾಂತ್ರಿಕ ವಿಭಾಗದ ಇ-ಮೇಲ್ ವಿಷಯ ನಿರ್ವಾಹಕರಿಗೆ.
11. ಹೆಚ್ಚುವರಿ ಪ್ರತಿಗಳು.

ನಗರ ಮತ್ತು ಗ್ರಾಮಾಂತರ ಯೋಜನಾ
ನಿರ್ದೇಶಕರ ಪರವಾಗಿ

36 NK(Suma)Circ